ದಿಃ 19.02.2026 ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋದಿಸಲಾಯಿತು.

**ಮುಖ್ಯ ವಿಚಾರಣೆಃ ವಾದಿ ಪರ ಶ್ರೀ ಎ.ಎನ್.ಟಿ ವಕೀಲರಿಂದ.**

ನಾನು ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಹಾಜರು ಪಡಿಸಿದ್ದು, ಅದರಲ್ಲಿರುವ ಸಂಗತಿಗಳೆಲ್ಲಾ ಸತ್ಯವಿದ್ದು, ಅದನ್ನು ನಾನೇ ಹೇಳಿ ಬರೆಸಿದ್ದೇನೆ ಹಾಗೂ ಪ್ರಮಾಣ ಪತ್ರಕ್ಕೆ ನಾನೇ ಸಹಿ ಮಾಡಿರುತ್ತೇನೆ.

ಈ ದಿವಸ ನಾನು ಈ ಕೆಳಕಂಡ ದಾಖಲೆಗಳನ್ನು ಹಾಜರು ಪಡಿಸುತ್ತಿದ್ದೇನೆ.

1. ಒಂದು ಜಿ.ಪಿ.ಎ ಅನ್ನು ಹಾಜರು ಪಡಿಸಿದ್ದು ಅದನ್ನು ನಿ.ಪಿ–01 ಎಂದು ಗುರುತಿಸಲಾಯಿತು.
2. ಮರಣ ಪ್ರಮಾಣ ಪತ್ರದ ಆನ್ ಲೈನ್ ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ತಕರಾರಿಗೆ ಒಳಪಟ್ಟು ನಿ.ಪಿ–02 ಎಂದು ಗುರುತಿಸಲಾಯಿತು.
3. ಎಂ.ಆರ್ 38/2 ರ ಮುಟೇಶನಿನ ಆನ್ ಲೈನ್ ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ತಕರಾರಿಗೆ ಒಳಪಟ್ಟು ನಿ.ಪಿ–03 ಎಂದು ಗುರುತಿಸಲಾಯಿತು.
4. ಎಂ.ಆರ್–ಟಿ–7 ರ ಆನ್ ಲೈನ್ ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ತಕರಾರಿಗೆ ಒಳಪಟ್ಟು ನಿ.ಪಿ–04 ಎಂದು ಗುರುತಿಸಲಾಯಿತು.
5. ಮೂರು ಆನ್ ಲೈನ್ ಆರಿ.ಟಿ.ಸಿ ಪ್ರತಿಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ತಕರಾರಿಗೆ ಒಳಪಟ್ಟು ಕ್ರಮವಾಗಿ ನಿ.ಪಿ–05 ರಿಂದ ನಿಪಿ–07 ಎಂದು ಗುರುತಿಸಲಾಯಿತು.

**ಮುಂದುವರಿಂದ ಮುಖ್ಯವಿಚಾರಣೆಗೆ ಸಮಯ ಕೋರಿದ್ದು ಸಮಯ ನೀಡಿ ಮುಂದೂಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಒಪ್ಪಿರುತ್ತಾರೆ.

*(ರಾಘವೇಂದ್ರ. ಡಿ.)*
ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು,
ಭದ್ರಾವತಿ